# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ, ಹಿಂದಿನ ಅಧ್ಯಕ್ಷರು ಹಾಲಿ ಸದಸ್ಯರಾದ ಶ್ರೀಮತಿ ಶ್ವೇತಾ ಶಿವಪೂಜೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂ.ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವ ಕುರಿತು ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಬೀದರ್ ಇವರ ಪತ್ರ ಸಂಖ್ಯೆ: ಜಿಪಬೀ/ಸಿಬ್ಬಂದಿ-2/ಸಿಆರ್-60/2017-18/25883, ದಿನಾಂಕ:02-01-2018.
3. ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ರವರ ಪತ್ರ ಸಂಖ್ಯೆ: ಕಂ/ಪ್ರಾಆಕ/ಜಿಪಂ/126/2018-19, ದಿನಾಂಕ:29-07-2019.

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು 48(4) ಮತ್ತು 48(V) ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳ ಮೇಲೆ ದಾಖಲಾಗುವ ದೂರುಗಳಿಗೆ ಸಂಬಂಧಿಸಿದಂತೆ ಅರೆನ್ಯಾಯಿಕ ಮಾದರಿಯಲ್ಲಿ ವಿಚಾರಣೆ ನಡೆಸುವ ಅಧಿಕಾರವನ್ನು ಸಂಬಂಧಿಸಿದ ಕಂದಾಯ ವಿಭಾಗಗಳ ಪ್ರಾದೇಶಿಕ ಆಯುಕ್ತರುಗಳಿಗೆ ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:02.02.2019 ರಲ್ಲಿ ವಹಿಸಿ, ಸರ್ಕಾರವು ಆದೇಶಿದೆ.

ಬೀದರ್ ಜಿಲ್ಲಾ ಪಂಚಾಯಿತಿ, ಬೀದರ್ ತಾಲ್ಲೂಕು, ಚಿಲ್ಲರ್ಗಿ ಗ್ರಾಮ ಪಂಚಾಯಿತಿಯ ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ಶ್ವೇತಾ ಶಿವಪೂಜೆ ಇವರು 2013-14 ಮತ್ತು 2014-15ನೇ ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿಯಲ್ಲಿ ಕ್ರಿಯಾ ಯೋಜನೆಯಂತೆ ಕೆಲಸ ನಿರ್ವಹಿಸದೆ ಕರ್ತವ್ಯ ಲೋಪ ವೆಸಗಿದ್ದಾರೆಂದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)(1)(V) ಮತ್ತು 48(4) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವ ರದ್ದು ಪಡಿಸುವಂತೆ ಓದಲಾದ (2) ಪತ್ರದಲ್ಲಿ ಕೋರಲಾಗಿದೆ.

ಓದಲಾದ (3)ರ ಪತ್ರದ ಜೊತೆ ವಿಚಾರಣಾಧಿಕಾರಿಗಳು ಹಾಗೂ ಪ್ರದೇಶೀಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ಇವರು ಈ ಪ್ರಕರಣದ ವಿಚಾರಣಾವರದಿಯನ್ನು ಸರ್ಕಾರಕ್ಕೆ ಕಳುಹಿಸಿದ್ದು ಪರಿಶೀಲಿಸಲಾಗಿ ಈ ಪ್ರಕರಣದಲ್ಲಿ ಅಂದರೆ ಚಿಲ್ಲರ್ಗಿ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರು ಆದ ಶ್ರೀಮತಿ ಶ್ವೇತಾ ಶಿವಪೂಜೆ ಇವರು, 2013-14 ಮತ್ತು 2014-15ನೇ ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿಯಲ್ಲಿ ಕ್ರಿಯಾ ಯೋಜನೆಯಂತೆ ಕೆಲಸ ನಿರ್ವಹಿಸದೇ ಕರ್ತವ್ಯ ಲೋಪ ವೆಸಗಿರುತ್ತಾರೆಂದು, ಸದರಿಯವರ ಗ್ರಾಮ ಪಂಚಾಯಿತಿ ಸದಸ್ಯತ್ವ ರದ್ದು ಪಡಿಸುವ ಕುರಿತು ದಿನಾಂಕ:21.08.2018 ರಂದು ಕಾರಣ ಕೇಳುವ ನೋಟಿಸು ಜಾರಿಮಾಡಲಾಗಿತ್ತು ನಂತರ ವಿಚಾರಣೆ ದಿನಾಂಕದಂದು ಕಛೇರಿಗೆ ಖುದ್ದಾಗಿ ಹಾಜರಾಗಿ, ಪ್ರಾದೇಶಿಕ ಆಯುಕ್ತರ ಸಮಕ್ಷಮದಲ್ಲಿ ಸಂಬಂಧಪಟ್ಟ ಎಲ್ಲಾ ಸಮರ್ಥನೀಯ ಆಗತ್ಯ ದಾಖಲೆ ಹಾಗೂ ಲಿಖಿತ ಹೇಳಿಕೆಯೊಂದಿಗೆ ತಪ್ಪದೇ ಹಾಜರಾಗುವಂತೆ ದಿನಾಂಕ:14.06.2019ರಂದು ವಿಚಾರಣೆ ನೋಟಿಸು ಜಾರಿಮಾಡಲಾಗಿತ್ತು. ಈ ಪ್ರಕಣದ ವಿಚಾರಣೆಯನ್ನು ದಿನಾಂಕ:24.06.2019, 08.07.2019 ಮತ್ತು 22.07.2019 ರಂದು ಜರುಗಿಸಲಾಗಿದೆ ಎಂದು ಪ್ರಾದೇಶಿಕ ಆಯುಕ್ತರು ತಮ್ಮ ವರದಿಯಲ್ಲಿ ತಿಳಿಸಿದ್ದು ವಿಚಾರಣೆ ದಿನಾಂಕದಂದು ಶ್ರೀಮತಿ ಶ್ವೇತಾ ಶಿವಪೂಜೆ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ, ಇವರು ಹಾಗೂ ಸಹಾಯಕ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್, ಬೀದರ್ ಮತ್ತು ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ) ಜಿಲ್ಲಾ ಪಂಚಾಯತ್ ಬೀದರ್ ಹಾಗೂ ತಾಲ್ಲೂಕು ಪಂಚಾಯಿತಿ ಬೀದರ್, ಮತ್ತು ಪಂಚಾಯಿತಿ ಆಭಿವೃದ್ಧಿ ಅಧಿಕಾರಿಗಳು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ

...1

ಇವರುಗಳು ವಿಚಾರಣೆಗೆ ಹಾಜರಾಗಿ, ಅವರವರ ಲೀಖಿತ ಹೇಳಿಕೆಗಳನ್ನು ಸಲ್ಲಿಸಿದ್ದಾರೆ. 13ನೇ ಹಣಕಾಸಿನ ಕ್ರಿಯಾ ಯೋಜನೆ ಸಿದ್ದಪಡಿಸಿ ಅನುಮೋದನೆ ಪಡೆದು ನಿಯಮಾನುಸಾರ ಅಭಿವೃದ್ಧಿ ಕೆಲಸ ಮಾಡಲಾಗಿದೆ ಹಾಗೂ ಇತರೆ ಯೋಜನೆಗಳ ಅಭಿವೃದ್ಧಿ ಸಾದಿಸಲು ಪ್ರಮಾಣಿಕ ಪ್ರಯತ್ನ ಮಾಡಲಾಗಿದೆ ಎಂದು ತಿಳಿಸಿದ್ದು ಸದರಿ ಪ್ರಕರಣದಲ್ಲಿ ಮಾಜಿ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರಾದ ಶ್ರೀಮತಿ ಶ್ವೇತಾ ಶಿವಪೂಜೆ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ ಇವರ ಮೇಲೆ ಮಾಡಲಾದ ಆರೋಪಗಳ ಬಗ್ಗೆ ವಿಚಾರಣ ಸಮಯದಲ್ಲಿ ಯಾಗಲಿ ಲಿಖಿತ ಹೇಳಿಕೆಯಲ್ಲಿ ಅಗಲಿ ಇವರ ಪರವಾಗಿ ಸಹಾಯಕ ಕಾರ್ಯದರ್ಶಿಗಳು ಜಿಲ್ಲಾ ಪಂಚಾಯತ್, ಬೀದರ್ ಮತ್ತು ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ) ಹಾಗೂ ತಾಲ್ಲೂಕು ಪಂಚಾಯಿತಿ, ಬೀದರ್ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ ಇವರುಗಳು ಆರೋಪಗಳ ಬಗ್ಗೆ ಸ್ಪಷ್ಟವಾದ ಮಾಹಿತಿಯನ್ನು ಸಲ್ಲಿಸಿರುವುದಿಲ್ಲ ಈ ಕಾರಣದಿಂದ ಇವರ ಕರ್ತವ್ಯ ನಿರ್ವಾಹಣೆಯಲ್ಲಿ ಲೋಪ ವೆಸಗಿದ್ದಾರೆಂದು ಸ್ಪಷ್ಟವಾಗಿ ಹೇಳಲು ಸಾಧ್ಯವಾಗಿಲ್ಲ ಎಂದು ಪ್ರಾದೇಶಿಕ ಆಯುಕ್ತರು ತಮ್ಮ ವರದಿಯಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ನಿರ್ಣಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/685/ಗ್ರಾಪಂಅ/2019**
**ಬೆಂಗಳೂರು, ದಿನಾಂಕ:-23-01-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೀದರ್ ಜಿಲ್ಲೆ, ಬೀದರ್ ತಾಲ್ಲೂಕು, ಚಿಲ್ಲರ್ಗಿ ಗ್ರಾಮ ಪಂಚಾಯಿತಿ, ಹಿಂದಿನ ಅಧ್ಯಕ್ಷರು ಹಾಲಿ ಸದಸ್ಯರಾದ ಶ್ರೀಮತಿ ಶ್ವೇತಾ ಶಿವಪೂಜೆ ಇವರ ಹಣಕಾಸಿನ ಅವ್ಯವಹಾರ, ಕರ್ತವ್ಯ ನಿರ್ವಹಣೆಯಲ್ಲಿ ಲೋಪ ವೆಸಗಿದ್ದಾರೆಂದು ಸ್ಪಷ್ಟವಾಗಿ ಹೇಳಲು ಸಾಧ್ಯವಾಗುವುದಿಲ್ಲ ಎಂದು ವಿಚಾರಾಣಾಧಿಕಾರಿಗಳು ವಿಚಾಣಾವರದಿಯಲ್ಲಿ ದಾಖಲಿಸಿದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ)(1)(V)ಮತ್ತು 48(4) ಉಲ್ಲಂಘಿಸಿರುವುದಿಲ್ಲವೆಂದು ಭಾವಿಸಿ ಪ್ರಾದೇಶಿಕ ಆಯುಕ್ತರ ವಿಚಾರಣಾವರದಿಯನ್ನು ಒಪ್ಪಿ ಪ್ರಕರಣವನ್ನು ಮುಕ್ತಾಯಗೊಳಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar
28/1/2020
(ನವೀನ್ ಕುಮಾರ್.ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

23/1/20

**ಗೆ,**

1. ವಿಚಾರಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು ಕಲಬುರಗಿ ವಿಭಾಗ, ಕಲಬುರಗಿ.
2. ಜಿಲ್ಲಾಧಿಕಾರಿ, ಬೀದರ ಜಿಲ್ಲೆ, ಬೀದರ್.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಬೀದರ್.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬೀದರ್, ಬೀದರ್ ಜಿಲ್ಲೆ.
5. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಚಿಲ್ಲರ್ಗಿ ಗ್ರಾಮ ಪಂಚಾಯಿತಿ, ಬೀದರ್ ಜಿಲ್ಲೆ.
6. ಶಾಖಾ ರಕ್ಷಾ ಕಡತ/ಗಣಕಕೋಶ/ಹೆಚ್ಚುವರಿ/ಪ್ರತಿ.